**ಕರ್ನಾಟಕ ಸರ್ಕಾರ**

ಸಂಖ್ಯೆ:ಗ್ರಾಅಪ 03 ಗ್ರಾನೀಸ (8)2017

2ನೇ ಮಹಡಿ, 'E' Block, K.H.B
Complex, ಕಾವೇರಿ ಭವನ, ಕೆ.ಜಿ.ರಸ್ತೆ,
ಬೆಂಗಳೂರು-09, ದಿನಾಂಕ:02.03.2017

**ಅತಿ ತುರ್ತು**

**ಇವರಿಂದ:**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**
ರಾಜ್ಯದ ಎಲ್ಲಾ (30) ಜಿಲ್ಲಾ ಪಂಚಾಯತ್‌ಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು

**ಮಾನ್ಯರೇ,**

**ವಿಷಯ:** ರಾಜ್ಯದ ಗ್ರಾಮೀಣ ಜನವಸತಿಗಳಲ್ಲಿ ಅನುಷ್ಠಾನಗೊಳಿಸಿರುವ ನೀರು ಶುದ್ಧೀಕರಣ ಘಟಕಗಳಿಗೆ ನೀರಿನ ಕೊರತೆ ಉಂಟಾದಲ್ಲಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡುವ ಬಗ್ಗೆ.

**ಉಲ್ಲೇಖ:** ದಿನಾಂಕ:23.02.2017ರಂದು ಮಾನ್ಯ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ಬರಪರಿಹಾರಕ್ಕೆ ಸಂಬಂಧಿಸಿದಂತೆ ನಡೆದ ಸಭೆಯ ನಡವಳಿ

---

ಮೇಲ್ಕಂಡ ವಿಷಯಕ್ಕೆ ಸಂಬಂಧಸಿದಂತೆ, ಉಲ್ಲೇಖಿತ ಮಾನ್ಯ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ಬರಪರಿಹಾರಕ್ಕೆ ಸಂಬಂಧಿಸಿದಂತೆ ನಡೆದ ಸಭೆಯ ನಡವಳಿಯಲ್ಲಿ (ನಡವಳಿ ಅಡಕವಿರಿಸಿದೆ) ನೀರು ಶುದ್ಧೀಕರಣ ಘಟಕಗಳಿಗೆ ಸಂಬಂಧಿಸಿದಂತೆ, ಗ್ರಾಮೀಣ ಪ್ರದೇಶಗಳಲ್ಲಿ ಶುದ್ಧ ಕುಡಿಯುವ ನೀರನ್ನು ಪೂರೈಕೆ ಮಾಡಲು **ನೀರು ಶುದ್ಧೀಕರಣ ಘಟಕ (RO Plant)**ಗಳಿಗೆ ನೀರಿನ ಕೊರತೆ ಉಂಟಾದಲ್ಲಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಿ, ಶುದ್ಧ ಕುಡಿಯುವ ನೀರನ್ನು ಪೂರೈಸಲು ಸೂಚಿಸಿದೆ.

ಈ ಹಿನ್ನಲೆಯಲ್ಲಿ ಟ್ಯಾಕರ್ ಮೂಲಕ ಶುದ್ಧ ಕುಡಿಯುವ ನೀರಿನ ಘಟಕಗಳಿಗೆ ಪೂರೈಸಲು ಕಚ್ಚಾ ನೀರಿನ ವೆಚ್ಚಗಳನ್ನು ಜಿಲ್ಲಾಧಿಕಾರಿಗಳಿಗೆ ಒದಗಿಸಿರುವ **'ರಾಜ್ಯ ಪ್ರಕೃತಿ ವಿಕೋಪ ಪರಿಹಾರ ನಿಧಿ'** (SDRF) ಅಡಿಯಲ್ಲಿ ಭರಿಸುವಂತೆ ಅಭಿವೃದ್ಧಿ ಆಯುಕ್ತರ ಸಭೆಯಲ್ಲಿ ತೀರ್ಮಾನಿಸಲಾಗಿದೆ. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕ ಅಧಿಕಾರಿಗಳು ಜಿಲ್ಲಾಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ನೀರು ಶುದ್ಧೀಕರಣ ಘಟಕಗಳಿಗೆ ನಿಗಧಿತ ಸಮಯದಲ್ಲಿ ಕಚ್ಚಾ ನೀರನ್ನು ಅಗತ್ಯವಿರುವ ಸಂದರ್ಭದಲ್ಲಿ ಟ್ಯಾಂಕರ್ ಮೂಲಕ ಪೂರೈಸಲು ವ್ಯವಸ್ಥೆ ಮಾಡಲು ಕ್ರಮವಹಿಸುವಂತೆ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರಿಂದ ನಿರ್ದೇಶಿತನಾಗಿದ್ದೇನೆ.

ತಮ್ಮ ವಿಶ್ವಾಸಿ,

(ಬಿ. ಕೃಷ್ಣಪ್ಪ)
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಪ್ರತಿಯನ್ನು:**

1. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 1ನೇ ಮಹಡಿ, 'E' Block, K.H.B Complex, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-09 ರವರ ಮಾಹಿತಿಗಾಗಿ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-01 ರವರ ಮಾಹಿತಿಗಾಗಿ ಸಲ್ಲಿಸಿದೆ.
3. ರಾಜ್ಯದ ಎಲ್ಲಾ (30) ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಮಾಹಿತಿಗಾಗಿ.
4. ರಾಜ್ಯದ ಎಲ್ಲಾ (4) ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತಗಳ ಅಧೀಕ್ಷಕ ಅಭಿಯಂತರರು,
5. ರಾಜ್ಯದ ಎಲ್ಲಾ (31) ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳ ಕಾರ್ಯಪಾಲಕ ಇಂಜಿನಿಯರ್‌ರವರ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ಇವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾ.ಅ&ಪಂ.ರಾಜ್ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ.
8. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ.

**ದಿನಾಂಕ:23.02.2017ರಂದು ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ಬರಪರಿಹಾರಕ್ಕೆ ಸಂಬಂಧಿಸಿದಂತೆ ನಡೆದ ಸಭೆಯ ನಡವಳಿಗಳು.**

**ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಪಟ್ಟಿಯು ಅನುಬಂಧ-1ರಲ್ಲಿದೆ.**

ಸರ್ಕಾರದ ಕಾರ್ಯದರ್ಶಿಗಳು, ಕಂದಾಯ ಇಲಾಖೆ(ವಿ.ನಿ) ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸುತ್ತಾ ಕಾರ್ಯಸೂಚಿ ಪ್ರಕಾರ ಸಭೆ ನಡೆಸಲು ಅನುಮತಿ ಕೋರಿದರು.

ಸಭೆಯಲ್ಲಿ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ, ಪರಿಹಾರ ಸಾಫ್ಟ್‌ವೇರ್‌ನಲ್ಲಿ ಬೆಳೆಹಾನಿಯ ಬಗ್ಗೆ ದಾಖಲಾಗಿರುವ ಪ್ರಗತಿಯ ವಿವರ, ಬೆಳೆ ಸಂರಕ್ಷಣೆ, ಮೇವು ವ್ಯವಸ್ಥೆ ಇತ್ಯಾದಿ ಬಗ್ಗೆ ಸಮಗ್ರವಾಗಿ ಚರ್ಚಿಸಲಾಗಿದೆ ಹಾಗೂ ಈ ಕೆಳಕಂಡ ಅಂಶಗಳ ಬಗ್ಗೆ ನಿರ್ಣಯ ತೆಗೆದುಕೊಳ್ಳಲಾಗಿದೆ.

i. ಕುಡಿಯುವ ನೀರಿನ ಸರಬರಾಜು ವ್ಯವಸ್ಥೆಗಾಗಿ ಆರ್ಥಿಕ ಇಲಾಖೆಯು ಬಿಡುಗಡೆ ಮಾಡಲು ಸಹಮತಿ ನೀಡಿರುವ ರೂ.100.00 ಕೋಟಿಯನ್ನು ಬರಪೀಡಿತ ಜಿಲ್ಲೆಗಳ ಟಾಸ್ಕ್‌ಫೋರ್ಸ್ ಸಮಿತಿಗೆ ಬಿಡುಗಡೆ ಮಾಡಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಕ್ರಮ ಕೈಗೊಳ್ಳುವುದು.

ii. ದಿನಾಂಕ:15.02.2017ರಂದು ನಡೆದ ಸಚಿವ ಸಂಪುಟದ ಉಪ ಸಮಿತಿ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದ ಪ್ರಕಾರ ಕುಡಿಯುವ ನೀರಿನ ಸರಬರಾಜು ಬಗ್ಗೆ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ತಹಶೀಲ್ದಾರ್ ಹಾಗೂ ಇತರೆ ಅಧಿಕಾರಿಗಳನ್ನೊಳಗೊಂಡಂತೆ ರಚಿಸಲಾದ ಸಮಿತಿಯು ಪ್ರತಿ ವಾರಕೊಮ್ಮೆ ಸಭೆ ಸೇರಿ ಕುಡಿಯುವ ನೀರಿನ ವ್ಯವಸ್ಥೆ ಬಗ್ಗೆ ಸಮಗ್ರವಾಗಿ ಪರಿಶೀಲಿಸಿ ಯಾವುದೇ ಸಂದರ್ಭದಲ್ಲಿ ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿಗೆ ತೊಂದರೆಯಾಗದಂತೆ ನಿಗಾ ವಹಿಸುವುದು.

iii. ನಗರ ಹಾಗೂ ಪಟ್ಟಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆಗಾಗಿ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಿರುವ ಅನುದಾನದ ಜೊತೆಗೆ ಎಸ್‌ಎಫ್‌ಸಿ ಅನುದಾನವನ್ನು ಬಳಸಲು ಕ್ರಮ ಕೈಗೊಳ್ಳುವುದು.

iv. ಬೆಳೆ ಕಟಾವು ಪ್ರಯೋಗವನ್ನು ದಿನಾಂಕ:28.02.2017ರೊಳಗೆ ಪೂರ್ಣಗೊಳಿಸುವುದು.

v. ಬರ ಪರಿಹಾರ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಕೆ.ಟಿ.ಪಿ.ಪಿ. ಕಲಂ.4(a) ಅಡಿ ವಿನಾಯ್ತಿ ನೀಡಿರುವ ಬಗ್ಗೆ ಸ್ಪಷ್ಟೀಕರಣ ನೀಡುವುದು.

vi. ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಶುದ್ಧ ಕುಡಿಯುವ ನೀರು ಸರಬರಾಜು ಮಾಡಲು ಅಳವಡಿಸಿರುವ ನೀರು ಶುದ್ಧೀಕರಣ ಘಟಕ (RO plant) ಗಳಿಗೆ ನೀರಿನ ಕೊರತೆ ಉಂಟಾದಲ್ಲಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಿ ಶುದ್ಧ ಕುಡಿಯುವ ನೀರಿನ್ನು ಸದಾಕಾಲ ಸರಬರಾಜು ಮಾಡಲು ವ್ಯವಸ್ಥೆ ಮಾಡುವುದು.

...2,

vii. 2016ರ ಮುಂಗಾರು ಹಂಗಾಮಿಗೆ ಸಂಬಂಧಿಸಿದಂತೆ ಬೆಳೆಹಾನಿ ಬಗ್ಗೆ ಪರಿಹಾರ ಸಾಫ್ಟ್‌ವೇರ್‌ನಲ್ಲಿ ಹೆಚ್ಚಿನ ಪ್ರಗತಿ ಸಾಧಿಸಿರುವ ಜಿಲ್ಲೆಗಳಿಂದ ಪ್ರಮಾಣ ಪತ್ರ ಪಡೆದು ಕೇಂದ್ರ ಸರ್ಕಾರವು ಬಿಡುಗಡೆ ಮಾಡಿರುವ ರೂ.450.00 ಕೋಟಿಯನ್ನು ಬೆಳೆ ಹಾನಿ ಪರಿಹಾರಕ್ಕಾಗಿ ಫಲಾನುಭವಿ ರೈತರಿಗೆ ಆರ್‌ಟಿಜಿಎಸ್ ಮೂಲಕ ವಿತರಿಸಲು ಕ್ರಮ ಕೈಗೊಳ್ಳುವುದು.

viii. ಮುಂದಿನ ದಿನಗಳಲ್ಲಿ ಮೇವಿನ ತೀವ್ರ ಸಮಸ್ಯೆ ಉಂಟಾಗುವ ಸಾಧ್ಯತೆ ಇರುವುದರಿಂದ ಹೊರ ರಾಜ್ಯಗಳಾದ ಪಂಜಾಬ್, ಆಂಧ್ರ ಪ್ರದೇಶ ಮತ್ತು ಮಹಾರಾಷ್ಟ್ರ ಇತ್ಯಾದಿಗಳಿಂದ ಮೇವು ಖರೀದಿಸುವ ಬಗ್ಗೆ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸಲು ಕ್ರಮ ಕೈಗೊಳ್ಳುವುದು ಹಾಗೂ ಅನುದಾನದ ಬಿಡುಗಡೆ ಬಗ್ಗೆ ಪಶು ಸಂಗೋಪನಾ ಇಲಾಖೆಯು ಕಂದಾಯ ಇಲಾಖೆಗೆ ಪ್ರಸ್ತಾವನೆ ಸಲ್ಲಿಸುವುದು.

ix. ಬೇಡಿಕೆ ಹಾಗೂ ಅವಶ್ಯಕತೆಗನುಗುಣವಾಗಿ ಬರಪೀಡಿತ ಹೋಬಳಿ ಮಟ್ಟದಲ್ಲಿ ಗೋಶಾಲೆ ಪ್ರಾರಂಭಿಸಲು ಹಾಗೂ ಸಾಧ್ಯವಾದಷ್ಟು ಮಟ್ಟಿಗೆ ಸರ್ಕಾರೇತರ ಸಂಸ್ಥೆ (NGOs) ಗಳನ್ನು ತೊಡಗಿಸಿಕೊಳ್ಳಲು ಪಶು ಸಂಗೋಪನಾ ಇಲಾಖೆಯು ಕ್ರಮ ಕೈಗೊಳ್ಳುವುದು.

x. ಸರ್ಕಾರಿ ಹಾಗೂ ಖಾಸಗಿ ಜಮೀನುಗಳಲ್ಲಿ ಮೇವು ಬೆಳೆಸಲು ಪ್ರೋತ್ಸಾಹಿಸಿ ಬೇಡಿಕೆಗನುಸಾರವಾಗಿ ಮೇವು ಬ್ಯಾಂಕ್‌ಗಳನ್ನು ತೆರೆದು ರಿಯಾಯಿತಿ ದರದಲ್ಲಿ ರೈತರಿಗೆ ಮೇವನ್ನು ವಿತರಿಸುವುದು.

xi. ಕುಡಿಯುವ ನೀರಿನ ವ್ಯವಸ್ಥೆಗಾಗಿ ಟ್ಯಾಂಕರ್ ಮೂಲಕ ಸರಬರಾಜು ಮಾಡಿರುವ ಬಿಲ್ಲಿನ ಮೊತ್ತವನ್ನು 15 ದಿವಸದೊಳಗೆ ಪಾವತಿಸಲು ಕ್ರಮ ಕೈಗೊಳ್ಳುವುದು.

ಸಭೆಯನ್ನು ವಂದನಾರ್ಪಣೆಯೊಂದಿಗೆ ಮುಕ್ತಾಯಗೊಳಿಸಲಾಯಿತು.

**ಕಂಇ 58 ಟಿಎನ್‌ಆರ್ 2017**

**(ಟಿ.ಎಂ.ವಿಜಯ ಭಾಸ್ಕರ್)**
ಅಪರ ಮುಖ್ಯ ಕಾರ್ಯದರ್ಶಿ ಹಾಗೂ
ಅಭಿವೃದ್ಧಿ ಆಯುಕ್ತರು